## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹಾಸನ ಜಿಲ್ಲೆಯ ಬೇಲೂರು-ಹಳೇಬೀಡು ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಗೆ ಅಂತಿಮ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ನಅಇ 127 ಮೈಅಪ್ರಾ 2019, ದಿನಾಂಕ 23.11.2020.
2. ಸದಸ್ಯ-ಕಾರ್ಯದರ್ಶಿ, ಬೇಲೂರು-ಹಳೇಬೀಡು ಯೋಜನಾ ಪ್ರಾಧಿಕಾರ, ಬೇಲೂರು ರವರ ಪತ್ರ ಸಂಖ್ಯೆ: ಸ್ಥ.ಯೋ.ಪ್ರಾ.ಬೇ-ಹ./ ಅ.ಮ.ಯೋ/01/2021-22, ದಿನಾಂಕ 13.01.2022.
3. ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಏಕ ಕಡತ ಸಂಖ್ಯೆ: DTCP/11/MPP/2016-17, ದಿನಾಂಕ: 10.02.2022.

******

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಆದೇಶದಲ್ಲಿ ಬೇಲೂರು-ಹಳೇಬೀಡು ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಗೆ ತಾತ್ಕಾಲಿಕ ಅನುಮೋದನೆ ನೀಡಲಾಗಿತ್ತು.

ಮೇಲೆ ಓದಲಾದ (2)ರ ಪತ್ರದಲ್ಲಿ ಬೇಲೂರು-ಹಳೇಬೀಡು ಯೋಜನಾ ಪ್ರಾಧಿಕಾರವು, ಬೇಲೂರು-ಹಳೇಬೀಡು ಸ್ಥಳೀಯ ಯೋಜನಾ ಪ್ರದೇಶಕ್ಕೆ ಸಿದ್ಧಪಡಿಸಿರುವ ಮಹಾಯೋಜನೆ ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(1) & (2) ರನ್ವಯ ಅಗತ್ಯ ಕ್ರಮ ಜರುಗಿಸಿ ಮಹಾಯೋಜನೆಯ ನಕ್ಷೆಗಳನ್ನು ಹಾಗೂ ವರದಿಯನ್ನು ಸಿದ್ಧಪಡಿಸಿ ಸರ್ಕಾರದ ಅಂತಿಮ ಅನುಮೋದನೆಗೆ ಶಿಫಾರಸ್ಸಿನೊಂದಿಗೆ ಕಳುಹಿಸಿಕೊಡುವಂತೆ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರಿಗೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (3)ರ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಏಕ ಕಡತದಲ್ಲಿ, ಬೇಲೂರು-ಹಳೇಬೀಡು ಜನಸಂಖ್ಯೆಯು 2031ರಲ್ಲಿ 43,500 ಗಳಷ್ಟು ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾಯೋಜನೆಯನ್ನು ತಯಾರಿಸಲಾಗಿದೆ. ಬೇಲೂರು-ಹಳೇಬೀಡು ಸ್ಥಳೀಯ ಯೋಜನಾ ಪ್ರದೇಶದ ಒಟ್ಟು 1546.45 ಹೆಕ್ಟೇರ್ ಪ್ರದೇಶವನ್ನು ನಗರದ ಅಭಿವೃದ್ಧಿಗಾಗಿ ನಗರೀಕರಣದ ಎಲ್ಲೆಯೆಂದು ಪ್ರಸ್ತಾಪಿಸಿ ಮಹಾಯೋಜನೆಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ (12)ರಲ್ಲಿ ನಿಗದಿಪಡಿಸಿರುವ ಅಂಶಗಳನ್ನು ಪರಿಗಣಿಸಿ ನಗರದ ಮುಂದಿನ ಯೋಜಿತ ಬೆಳವಣಿಗೆಗೆ ಪ್ರಸ್ತಾಪಿಸಿರುವ 1546.45 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 1008.47 ಹೆಕ್ಟೇರ್ (ಶೇ.65.21), ವಾಣಿಜ್ಯಕ್ಕಾಗಿ 48.65 ಹೆಕ್ಟೇರ್ (ಶೇ.3.15), ಕೈಗಾರಿಕೆಗಾಗಿ 28.00 ಹೆಕ್ಟೇರ್ (ಶೇ.1.81), ಸಾರ್ವಜನಿಕ/ಅರೆ ಸಾರ್ವಜನಿಕ ಉಪಯೋಗಕ್ಕೆ 92.04 ಹೆಕ್ಟೇರ್, (ಶೇ.5.95) ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ 164.19 ಹೆಕ್ಟೇರ್ (ಶೇ.10.62) ಸಾರ್ವಜನಿಕ ಉಪಯುಕ್ತತೆಗಾಗಿ 7.68 ಹೆಕ್ಟೇರ್ (ಶೇ.0.50), ಹಾಗೂ ಸಾರಿಗೆ ಸಂಪರ್ಕ ವಲಯಕ್ಕೆ 197.42 ಹೆಕ್ಟೇರ್ (ಶೇ.12.76), ಪ್ರದೇಶವನ್ನು ನಿಗಧಿಪಡಿಸಲಾಗಿದೆ. ಮಹಾಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(3) ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

..2..

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 427 ಮೈಅಪ್ರಾ 2021, ಬೆಂಗಳೂರು, ದಿನಾಂಕ: 18.03.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಹಾಸನ ಜಿಲ್ಲೆಯ ಬೇಲೂರು-ಹಳೇಬೀಡು ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾಯೋಜನೆಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(3)ರನ್ವಯ ಅಂತಿಮ ಅನುಮೋದನೆಯನ್ನು ನೀಡಲಾಗಿದೆ. ಮಹಾಯೋಜನೆಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

**ಷರತ್ತು:-**

ಈ ಆದೇಶದ ದಿನಾಂಕದಿಂದ ಎರಡು ವರ್ಷಗಳವರೆಗೆ ಪ್ರಾಧಿಕಾರವು ಯಾವುದೇ ಭೂ ಉಪಯೋಗ ಬದಲಾವಣೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಲತಾ.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ
(ಅಭಿವೃದ್ಧಿ ಪ್ರಾಧಿಕಾರ ಮತ್ತು ನಯೋಸೇ)
ನಗರಾಭಿವೃದ್ಧಿ ಇಲಾಖೆ.
18-3-22

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು :- ರಾಜ್ಯ ಪತ್ರದಲ್ಲಿ ಪ್ರಕಟಿಸಿ 50 ಪ್ರತಿಗಳನ್ನು ಈ ಸಚಿವಾಲಯಕ್ಕೆ ಒದಗಿಸುವುದು.

**ಪ್ರತಿ:**

1. ಜಿಲ್ಲಾಧಿಕಾರಿ, ಹಾಸನ ಜಿಲ್ಲೆ, ಹಾಸನ.
2. ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು.
3. ಜಂಟಿ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ವಿಭಾಗೀಯ ಕಛೇರಿ, ಮೈಸೂರು.
4. ಸದಸ್ಯ ಕಾರ್ಯದರ್ಶಿ, ಯೋಜನಾ ಪ್ರಾಧಿಕಾರ ಬೇಲೂರು-ಹಳೇಬೀಡು.
5. ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿಗಳು.